# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಅಡಿ 2012-13ನೇ ಸಾಲಿಗೆ ಮೊದಲನೇ ಕಂತಿನ ಅನುದಾನವನ್ನು ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡುವ ಬಗ್ಗೆ.

ಉಲ್ಲೇಖ:-

1. ಸರ್ಕಾರದ ಆದೇಶ ಸಂ.ಗ್ರಾಅಪ.13.ಆಂಆಸ.2012 ದಿನಾಂಕ:02.04.2012 ಹಾಗೂ 02.4.11.
2. ಯೋಜನಾ ಆಯೋಗ(ಪಶ್ಚಿಮ ಘಟ್ಟಗಳ ಸಚಿವಾಲಯ), ಭಾರತ ಸರ್ಕಾರ, ನವದೆಹಲಿ ಇವರ ಪತ್ರ ಸಂ.ಪಿಸಿ ಎಂ.13053/5/2/2012 ಎಂಎಲ್‌ಪಿ ದಿನಾಂಕ:27.3.12.
3. ಯೋಜನಾ ಆಯೋಗ(ಪಶ್ಚಿಮ ಘಟ್ಟಗಳ ಸಚಿವಾಲಯ), ಭಾರತ ಸರ್ಕಾರ, ನವದೆಹಲಿ ಇವರ ಪತ್ರ ಸಂ.ಪಿಸಿ(ಪಿ)19/320/SCA/2012-WGS ದಿನಾಂಕ:19.7.2012.
4. ಆರ್ಥಿಕ ಇಲಾಖೆಯ ಜಮಾ ಧೃಢೀಕರಣ ಪತ್ರ **CCS NO. FD.43. BGL-2012** ದಿನಾಂಕ:31.7.2012.

****

ಪ್ರಸ್ತಾವನೆ:-

ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಅನುಷ್ಠಾನವನ್ನು ಮೇಲೆ ಓದಲಾದ ಪತ್ರ (1)ರಂತೆ 2012-13ನೇ ಸಾಲಿನಲ್ಲಿ ಮುಂದುವರೆಸಲಾಗಿದೆ. ಭಾರತ ಸರ್ಕಾರದ ಯೋಜನಾ ಆಯೋಗದ ಪಶ್ಚಿಮ ಘಟ್ಟಗಳ ಸಚಿವಾಲಯವು ಮೇಲೆ ಓದಲಾದ ಪತ್ರ (2) ರಲ್ಲಿ ಈ ಕಾರ್ಯಕ್ರಮದ ಅನುಷ್ಠಾನಕ್ಕಾಗಿ 2012-13ನೇ ಸಾಲಿನಲ್ಲಿ ₹ 3240.00 ಲಕ್ಷ ಅನುದಾನ ಹಂಚಿಕೆ ಮಾಡಲಾಗಿರುತ್ತದೆ. ಇದರಲ್ಲಿ ಶೇ.90 ಭಾಗ ಅಂದರೆ ₹ 2916.00 ಲಕ್ಷ ಕೇಂದ್ರ ಸರ್ಕಾರದ ಬಿಡುಗಡೆ ಮಾಡಲಿರುವ ನಿಧಿ ರೂಪದ್ದಾಗಿದ್ದು, ಉಳಿಕೆ ಶೇ.10ಭಾಗ ಅಂದರೆ ರಾಜ್ಯದ ಪಾಲು ₹ 324.00ಲಕ್ಷಗಳು ಆಗಿರುತ್ತದೆ. ಕೇಂದ್ರ ಸರ್ಕಾರದ ಯೋಜನಾ ಆಯೋಗವು ಮೇಲೆ ಓದಲಾದ ಪತ್ರ (3)ರಲ್ಲಿ ಪ್ರಸಕ್ತ ಸಾಲಿನ ಒಟ್ಟಾರೆ ಅನುದಾನ ₹ 3240.00 ಲಕ್ಷಗಳ ಪೈಕಿ ಶೇ.90ರಷ್ಟು ಅಂದರೆ ₹2916.00 ಲಕ್ಷಗಳಲ್ಲಿ ಶೇ.75ರಷ್ಟು ವಿಶೇಷ ಕೇಂದ್ರ ಅನುದಾನದ ನಿಧಿ ಭಾಗದ ಮೊತ್ತವಾದ ₹2187.00 ಲಕ್ಷಗಳನ್ನು ಮೊದಲನೇ ಕಂತಿನ ಅನುದಾನವಾಗಿ ರಾಜ್ಯಕ್ಕೆ ಬಿಡುಗಡೆ ಮಾಡಿದೆ. ಈ ಅನುದಾನವು ರಾಜ್ಯ ಸರ್ಕಾರದ ಖಾತೆಗೆ ಜಮಾ ಆಗಿರುವ ಬಗ್ಗೆ ಆರ್ಥಿಕ ಇಲಾಖೆಯು ಮೇಲೆ ಓದಲಾದ ಪತ್ರ (4)ರಂತೆ ಜಮಾ ಧೃಢೀಕರಣ ಪತ್ರವನ್ನು ನೀಡಿರುತ್ತದೆ. ಈ ಅನುದಾನದ ಜೊತೆಗೆ ರಾಜ್ಯದ ಪಾಲಿನ ಶೇ.10 ಅನುದಾನವಾದ ₹243.00 ಲಕ್ಷಗಳನ್ನು ಸೇರಿಸಿ ರಾಜ್ಯದ ಸಂಬಂಧಪಟ್ಟ 11 ಜಿಲ್ಲಾ ಪಂಚಾಯತಿಗಳಿಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ.

ಆದುದರಿಂದ ಈ ಆದೇಶ.

ಸರ್ಕಾರದ ಆದೇಶ ಸಂ.ಗ್ರಾಅಪ.15.ಪಘಯೋ.2012 ಬೆಂಗಳೂರು, ದಿನಾಂಕ:14-08-2012.

ಕೇಂದ್ರ ಪುರಸ್ಕೃತ ಕಾರ್ಯಕ್ರಮವಾದ ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮವನ್ನು 2012-13ನೇ ಸಾಲಿನಲ್ಲಿ ಅನುಮೋದಿತ ಕ್ರಿಯಾ ಯೋಜನೆಯ ಅನ್ವಯ ಅನುಷ್ಠಾನಗೊಳಿಸುವ ಸಲುವಾಗಿ ಕೇಂದ್ರ ಸರ್ಕಾರವು ಬಿಡುಗಡೆ ಮಾಡಿರುವ ಮೊದಲನೇ ಕಂತಿನ ವಿಶೇಷ ಕೇಂದ್ರ ಅನುದಾನ ₹ 2187.00 ಲಕ್ಷ ಮತ್ತು ರಾಜ್ಯದ ಪಾಲಿನ ಶೇ.10ರ

ಅನುದಾನವಾದ ₹243.00 ಲಕ್ಷಗಳನ್ನು ಸೇರಿಸಿ ಒಟ್ಟಾರೆ ₹2430.00 ಲಕ್ಷಗಳ ಪೈಕಿ ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಯೋಜನಾ ಕೋಶಕ್ಕೆ ನಿಗದಿಯಾಗಿದ್ದ ₹ 56.57 ಲಕ್ಷ ಅನುದಾನದಲ್ಲಿ ₹ 42.428 ಲಕ್ಷಗಳನ್ನು ಹೊಂದಾಣಿಕೆ ಮಾಡಿಕೊಂಡು ಬಾಕಿ ಉಳಿದ ಅನುದಾನ ₹ 2387.572 ಲಕ್ಷಗಳನ್ನು (₹ ಇಪ್ಪತ್ತ ಮೂರು ಕೋಟಿ ಎಂಭತ್ತೇಳು ಲಕ್ಷದ ಐವತ್ತೇಳು ಸಾವಿರದ ಇನ್ನೂರು ಮಾತ್ರ) ರಾಜ್ಯದ 11 ಜಿಲ್ಲಾ ಪಂಚಾಯತಿಗಳಿಗೆ ಅನುಬಂಧ-1ರಲ್ಲಿ ತೋರಿಸಿರುವಂತೆ ಈ ಕೆಳಕಂಡ ನಿಬಂಧನೆಗಳಿಗೆ ಒಳಪಟ್ಟು ಬಿಡುಗಡೆ ಮಾಡಲಾಗಿದೆ.

1. 2012-13ನೇ ಸಾಲಿನಲ್ಲಿ ನಿಮ್ಮ ಜಿಲ್ಲೆಯ ಅನುಮೋದಿತ ಕ್ರಿಯಾಯೋಜನೆಯಲ್ಲಿ ನಮೂದಿಸಿರುವ ಕಾರ್ಯಕ್ರಮಗಳನ್ನು ಮಾತ್ರ ನಿಮ್ಮ ಜಿಲ್ಲೆಗೆ ನಿಗದಿಪಡಿಸಿರುವ ಅನುದಾನಕ್ಕೊಳಪಟ್ಟು ಅನುಷ್ಠಾನಗೊಳಿಸುವುದು.
2. ಎಸ್‌ಸಿಪಿ/ಟಿಎಸ್‌ಪಿ ಅಡಿ ಬಿಡುಗಡೆ ಆದ ಹಣವನ್ನು ಆದ್ಯತೆ ಮೇರೆಗೆ ಕಾರ್ಯಕ್ರಮ ಕೈಗೊಂಡು ಸಂಪೂರ್ಣವಾಗಿ ವೆಚ್ಚ ಮಾಡಬೇಕು. ಭೌತಿಕ ಹಾಗೂ ಆರ್ಥಿಕ ವರದಿಗಳನ್ನು ಪ್ರತ್ಯೇಕವಾಗಿ SCP:TSP ಅಡಿ ಕಳುಹಿಸುವುದು (Sectorwise)
3. ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮವನ್ನು ಕೇಂದ್ರ ಸರ್ಕಾರವು ಕಾಲಕಾಲಕ್ಕೆ ಹೊರಡಿಸುತ್ತಿರುವ ಮಾರ್ಗಸೂಚಿಗಳನ್ವಯ ಅನುಷ್ಠಾನಗೊಳಿಸುವುದು.
4. ಒಂದು ವಲಯಕ್ಕೆ ನಿಗದಿಪಡಿಸಿರುವ ಅನುದಾನವನ್ನು ಇನ್ನೊಂದು ವಲಯಕ್ಕೆ ಯಾವುದೇ ಕಾರಣಕ್ಕೂ ವರ್ಗಾಯಿಸಬಾರದು.
5. <u>2011-12ನೇ ಸಾಲಿನಲ್ಲಿ ಬಿಡುಗಡೆ ಮಾಡಿದ ಅನುದಾನದಲ್ಲಿ ಖರ್ಚಾಗದೇ ಬಾಕಿ ಉಳಿದ ಅನುದಾನವನ್ನು ಸೆಪ್ಟೆಂಬರ್ 2012ರೊಳಗಾಗಿ ಸಂಪೂರ್ಣವಾಗಿ ಕಡ್ಡಾಯವಾಗಿ ಖರ್ಚು ಮಾಡಿ ದಿನಾಂಕ:10-10-2012ರೊಳಗಾಗಿ ಭೌತಿಕ ಮತ್ತು ಆರ್ಥಿಕ ಪ್ರಗತಿ ವರದಿಯನ್ನು (Sectorwise) ಸರ್ಕಾರಕ್ಕೆ ತಪ್ಪದೇ ಸಲ್ಲಿಸುವುದು. ಪ್ರಸಕ್ತ ಸಾಲಿನ ಮೊದಲನೇ ಕಂತಿನ ಅನುದಾನದಲ್ಲಿ ಶೇಕಡಾ 60 ಕ್ಕಿಂತ ಹೆಚ್ಚಾಗಿ ಖರ್ಚು ಮಾಡಿದಲ್ಲಿ ಮಾತ್ರ ಎರಡನೇ ಕಂತಿನ ಅನುದಾನ ಈ ಸಾಲಿನಲ್ಲಿ ಕೇಂದ್ರದಿಂದ ಬಿಡುಗಡೆಯಾಗಲಿದೆ ಎಂಬ ಅಂಶವನ್ನು ಮುಖ್ಯವಾಗಿ ಗಮನಿಸುವುದು ಹಾಗೂ 2011-12ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನ ಖರ್ಚಾದ ಬಗ್ಗೆ ಆಡಿಟ್ ವರದಿ ಹಾಗೂ ವಿನಿಯೋಗ ಪತ್ರವನ್ನು ಆದ್ಯತೆ ಮೇರೆ ಸಲ್ಲಿಸುವುದು.</u>
6. ಕೇಂದ್ರ ಸರ್ಕಾರವು ನಿಗದಿಪಡಿಸಿರುವ ನಮೂನೆಯಲ್ಲೇ ಪ್ರತಿ ತ್ರೈಮಾಸಿಕ ವರದಿಯನ್ನು ಸಕಾಲದಲ್ಲಿ ತಪ್ಪದೇ ಸರ್ಕಾರಕ್ಕೆ ಸಲ್ಲಿಸುವುದು.
7. ಜಿಲ್ಲಾ ಪಂಚಾಯತಿಯ ಮುಖ್ಯ ಲೆಕ್ಕಾಧಿಕಾರಿಗಳು ಸಹಾಯಾನುದಾನದ ಬಿಲ್ಲಿನ ಮೇಲೆ ನಿಯಮಗಳ ಪ್ರಕಾರ ಅನುದಾನವನ್ನು ಈ ಕೆಳಕಂಡ ಲೆಕ್ಕಶೀರ್ಷಿಕೆಯಲ್ಲಿ ಖಜಾನೆಯಿಂದ ಪಡೆಯುವುದು.

ಈ ಯೋಜನೆಯಡಿ ಈ ಸಾಲಿಗೆ ಮೀಸಲಿಟ್ಟಿರುವ ಅನುದಾನವನ್ನು ಜಿಲ್ಲಾ ವಲಯದ ಲೆಕ್ಕಶೀರ್ಷಿಕೆ 2551-01-198-6-02 ರಡಿ ಭರಿಸುವುದು.

ಈ ಆದೇಶವನ್ನು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರ ಟಿಪ್ಪಣಿ ಸಂ.ಗ್ರಾಅಪ.72.ಪಿಬಿಎಸ್.2012 ದಿನಾಂಕ:14-08-2012ರಲ್ಲಿ ಸಹಮತಿಸಿದಂತೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

ಸಹಿ:
(ಎಂ.ದೀಪಾ)
ನಿರ್ದೇಶಕರು(ಗ್ರಾಮೂಸೌ-II)
ಹಾಗೂ ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ರವರಿಗೆ ಈ ಆದೇಶವನ್ನು ರಾಜ್ಯ ಪತ್ರದ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ.

ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು/ಧಾರವಾಡ
2. ಅಧ್ಯಕ್ಷರು, ಜಿಲ್ಲಾ ಪಂಚಾಯತ್, ಬೆಳಗಾಂ/ಚಾಮರಾಜನಗರ/ಚಿಕ್ಕಮಗಳೂರು/ದಕ್ಷಿಣ ಕನ್ನಡ/ ಧಾರವಾಡ/ ಹಾಸನ/ಕೊಡಗು/ಮೈಸೂರು/ಶಿವಮೊಗ್ಗ/ಉಡುಪಿ ಮತ್ತು ಉತ್ತರ ಕನ್ನಡ
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು/ಉಪ ಕಾರ್ಯದರ್ಶಿ(ಅಭಿ), ಜಿಲ್ಲಾ ಪಂಚಾಯತ್, ಬೆಳಗಾಂ/ಚಾಮರಾಜನಗರ/ಚಿಕ್ಕಮಗಳೂರು/ದಕ್ಷಿಣ ಕನ್ನಡ/ ಧಾರವಾಡ/ ಹಾಸನ/ ಕೊಡಗು/ ಮೈಸೂರು/ಶಿವಮೊಗ್ಗ/ಉಡುಪಿ ಮತ್ತು ಉತ್ತರ ಕನ್ನಡ
4. ಜಿಲ್ಲಾ ಖಜಾನಾಧಿಕಾರಿಗಳು, ಬೆಳಗಾಂ/ಚಾಮರಾಜನಗರ/ಚಿಕ್ಕಮಗಳೂರು/ದಕ್ಷಿಣ ಕನ್ನಡ/ ಧಾರವಾಡ/ ಹಾಸನ/ಕೊಡಗು/ಮೈಸೂರು/ಶಿವಮೊಗ್ಗ/ಉಡುಪಿ ಮತ್ತು ಉತ್ತರ ಕನ್ನಡ
5. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, 7ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಬೆಂಗಳೂರು
6. ವಿಶೇಷಾಧಿಕಾರಿ (ಜಿಲ್ಲಾ ಪಂಚಾಯತ್) ಹಾಗೂ ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
7. ಉಪ ನಿರ್ದೇಶಕರು, ಖಜಾನೆ ಗಣಕಜಾಲ ನಿರ್ವಹಣಾ ಕೇಂದ್ರ, ಸೌತ್ ಬ್ಲಾಕ್, ಎರಡನೇ ಮಹಡಿ, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು

ಪ್ರತಿಯನ್ನು ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು
3. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿ(ಪಂಚಾಯತ್ ರಾಜ್)ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
4. ಆಂತರಿಕ ಆರ್ಥಿಕ ಸಲಹೆಗಾರರು ಹಾಗೂ ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
5. ನಿರ್ದೇಶಕರು, ಖಜಾನೆ ಇಲಾಖೆ, ಪೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಕೇಂದ್ರ, ಬೆಂಗಳೂರು
6. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು

7. ನಿವಾಸಿ ಆಯುಕ್ತರು, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ಕರ್ನಾಟಕ ಭವನ, ನವದೆಹಲಿ
8. ಶ್ರೀ.ಆಂಜನೇಯಲು, ನಂ.10, ಕೌಟಿಲ್ಯ ಮಾರ್ಗ, ಚಾಣಕ್ಯಪುರಿ, ಕರ್ನಾಟಕ ಭವನ, ನವದೆಹಲಿ
9. ಮುಖ್ಯ ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು ರವರಿಗೆ ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಲು ಕೋರಿ.
10. ಮಾಹಿತಿ ಅಧಿಕಾರಿ, ವೆಬ್‌ಸೈಟ್ ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಶಾಖಾಧಿಕಾರಿ, ಪತ್ರ ಸ್ವೀಕಾರ ಮತ್ತು ರವಾನೆ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತಕ್ಕೆ/ಹೆಚ್ಚುವರಿ ಪ್ರತಿಗಳು.

ಅನುಬಂಧ-1

ಸರ್ಕಾರದ ಆದೇಶ ಸಂ.ಗ್ರಾಅಪ.15.ಪಘಯೋ.2012 ಬೆಂಗಳೂರು, ದಿನಾಂಕ:14-08-2012

ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮದ ಅಡಿ 2012-13ನೇ ಸಾಲಿನ ಜಿಲ್ಲಾವಾರು

ಮೊದಲನೇ ಕಂತಿನ ಅನುದಾನ ಬಿಡುಗಡೆ ತ:ಖ್ತೆ. ( ₹ ಲಕ್ಷಗಳಲ್ಲಿ)

| ಕ್ರ. ಸಂ. | ಜಿಲ್ಲೆ | 2012-13ನೇ ಸಾಲಿನ ಜಿಲ್ಲಾವಾರು ಅನುದಾನ ಹಂಚಿಕೆ | ಜಿಲ್ಲೆಗಳಿಗೆ ಬಿಡುಗಡೆ ಮಾಡಲಾಗುತ್ತಿರುವ ಮೊದಲನೇ ಕಂತಿನ ಅನುದಾನ | | |
|---|---|---|---|---|---|
| | | | ಒಟ್ಟು ಮೊತ್ತ | ಕಾಲಂ 4ರ ಪೈಕಿ SCPಗೆ ಬಿಡುಗಡೆ ಮಾಡಬೇಕಾದ ಅನುದಾನ | ಕಾಲಂ 4ರ ಪೈಕಿ TSP ಗೆ ಬಿಡುಗಡೆ ಮಾಡಬೇಕಾದ ಅನುದಾನ |
| **1** | **2** | **3** | **4** | **5** | **6** |
| 1 | ಬೆಳಗಾಂ | 514.530 | 385.898 | 41.918 | 51.713 |
| 2 | ಚಾಮರಾಜನಗರ | 94.820 | 71.115 | 13.403 | 6.683 |
| 3 | ಚಿಕ್ಕಮಗಳೂರು | 303.990 | 227.990 | 40.215 | 9.435 |
| 4 | ದಕ್ಷಿಣ ಕನ್ನಡ | 226.930 | 170.198 | 23.693 | 12.225 |
| 5 | ಧಾರವಾಡ | 73.920 | 55.440 | 4.365 | 4.920 |
| 6 | ಹಾಸನ | 243.820 | 182.865 | 49.620 | 3.300 |
| 7 | ಕೊಡಗು | 272.690 | 204.518 | 21.345 | 16.163 |
| 8 | ಮೈಸೂರು | 106.650 | 79.988 | 22.898 | 17.783 |
| 9 | ಶಿವಮೊಗ್ಗ | 451.500 | 338.625 | 44.318 | 10.275 |
| 10 | ಉತ್ತರ ಕನ್ನಡ | 568.040 | 426.030 | 19.845 | 5.153 |
| 11 | ಉಡುಪಿ | 326.540 | 244.905 | 18.383 | 12.350 |
| | ಒಟ್ಟು: | **3183.430** | **2387.572** | **300.000** | **150.000** |
| 12 | ಪಶ್ಚಿಮ ಘಟ್ಟಗಳ ಅಭಿವೃದ್ಧಿ ಕಾರ್ಯಕ್ರಮ ಯೋಜನಾ ಕೋಶ | 56.570 | 42.428 | - | - |
| | ಜುಮ್ಲಾ | **3240.000** | **2430.000** | **300.000** | **150.000** |

ಸಹಿ:
(ಎಂ.ದೀಪಾ)
ನಿರ್ದೇಶಕರು(ಗ್ರಾಮೂಸೌ-II)
ಹಾಗೂ ಪದ ನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ